# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1222 (1286)

ಸದಸ್ಯರ ಹೆಸರು : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 24.12.2021

ಉತ್ತರಿಸುವ ಸಚಿವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಮತ್ತು ಪಂಚಾಯತ್ ರಾಜ್ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯತ್ ಗಳಿಗೆ ಇಂಟರ್‌ನೆಟ್ ಸೌಲಭ್ಯವನ್ನು ಅಳವಡಿಸಲಾಗಿದೆ: (ವಿವರ ನೀಡುವುದು. | ಕಲಬುರಗಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ 261 ಗ್ರಾಮ ಪಂಚಾಯತ್‌ಗಳಲ್ಲಿ 221 ಗ್ರಾಮ ಪಂಚಾಯತ್‌ಗಳಿಗೆ ಮಾತ್ರ ಬಿ.ಎಸ್.ಎನ್.ಎಲ್ ಇಂಟರ್ ನೆಟ್ ಸೌಲಭ್ಯ ಒದಗಿಸಲಾಗಿದೆ.<br>ಯಾದಗಿರಿ ಜಿಲ್ಲೆಯ ಒಟ್ಟು 122 ಗ್ರಾಮ ಪಂಚಾಯತ್‌ಗಳಲ್ಲಿ 96 ಗ್ರಾಮ ಪಂಚಾಯತ್‌ಗಳಿಗೆ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸಲಾಗಿದೆ. (ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ) |
| ಆ | ಇನ್ನುಳಿದ ಗ್ರಾಮ ಪಂಚಾಯತ್‌ಗಳಿಗೆ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸದಿರಲು ಕಾರಣವೇನು; ಯಾವಾಗ ಇಂಟರ್‌ನೆಟ್ ಸೌಲಭ್ಯವನ್ನು ಒದಗಿಸಲಾಗುವುದು; | ಕಲಬುರಗಿ ಜಿಲ್ಲೆಯ ಇನ್ನುಳಿದ 40 ಗ್ರಾಮ ಪಂಚಾಯತ್‌ಗಳಿಗೆ ಬಿ.ಎಸ್.ಎನ್.ಎಲ್ ಇಲಾಖೆಯೊಂದಿಗೆ ಚರ್ಚಿಸಿ, ಶೀಘ್ರದಲ್ಲಿ ಇಂಟರ್ ನೆಟ್ ಸೌಲಭ್ಯ ಒದಗಿಸಲಾಗುವುದು.<br>ಯಾದಗಿರಿ ಜಿಲ್ಲೆಯ ಇನ್ನುಳಿದ 26 ಗ್ರಾಮ ಪಂಚಾಯತ್‌ಗಳಿಗೆ ಇಂಟರ್‌ನೆಟ್ ಒದಗಿಸುವ ಹಂತದಲ್ಲಿರುತ್ತದೆ. |
| ಇ | ಇ-ಸ್ವತ್ತು ಮುಖಾಂತರ 9 ಹಾಗೂ 11 ನಮೂನೆಗಳನ್ನು ವಿತರಿಸಲು ಗ್ರಾಮ ಪಂಚಾಯತ್‌ರವರು ವಿಧಿಸುವ ಶುಲ್ಕವೆಷ್ಟು? (ವಿವರ ನೀಡುವುದು) | ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11 ಎ ಅಥವಾ ನಮೂನೆ-11 ಬಿ ವಿತರಿಸಲು ರೂ.50/- ಗಳ ಶುಲ್ಕವನ್ನು ನಿಗಧಿಪಡಿಸಿದೆ. |

ಸಂಖ್ಯೆ: ಗ್ರಾಅಪ/155/ಇ-ಆಡಳಿತ/2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು
ಮತ್ತು ಪಂಚಾಯತ್ ರಾಜ್ ಸಚಿವರು.